# <u>ಕರ್ನಾಟಕ ವಿಧಾನ ಪರಿಷತ್ತು</u>

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **927** |
| ಸದಸ್ಯರ ಹೆಸರು | ಶ್ರೀ ಸಲೀಂ ಅಹಮದ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 21.09.2022 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಬೆಂಗಳೂರು ನಗರ ಜಿಲ್ಲೆಯಲ್ಲಿ ಕಳೆದ 5 ವರ್ಷಗಳಿಂದ ಪೋಡಿಗಾಗಿ ಎಷ್ಟು ಅರ್ಜಿಗಳನ್ನು ಸ್ವೀಕರಿಸಲಾ ಗಿದೆ; (ತಾಲ್ಲೂಕುವಾರು, ಜಿಲ್ಲಾವಾರು ಅಂಕಿ ಅಂಶ ಗಳನ್ನು ಒದಗಿಸುವುದು)</td><td>ಬೆಂಗಳೂರು ನಗರ ಜಿಲ್ಲೆಯಲ್ಲಿ ಕಳೆದ 5 ವರ್ಷಗಳಿಂದ ತತ್ಕಾಲ್ ಪೋಡಿಗಾಗಿ ಸಲ್ಲಿಕೆಯಾದ ಅರ್ಜಿಗಳ ಪ್ರಗತಿ ವಿವರ ಈ ಕೆಳಕಂಡಂತಿದೆ:-
<table>
<tr><th>ತಾಲ್ಲೂಕು</th><th>ಪ್ರಾ. ಶಿಲ್ಕು</th><th>ಸ್ವೀಕೃತಿ</th><th>ಒಟ್ಟು</th><th>ವಿಲೇ</th><th>ಬಾಕಿ</th><th>ಕಂದಾಯ ಶಾಖೆಯಲ್ಲಿ ಬಾಕಿ</th><th>ಭೂಮಾಪನ ಶಾಖೆಯಲ್ಲಿ ಬಾಕಿ</th></tr>
<tr><td>ಬೆಂಗಳೂರು ಉತ್ತರ</td><td>386</td><td>1711</td><td>2097</td><td>1281</td><td>816</td><td>496</td><td>320</td></tr>
<tr><td>ಬೆಂಗಳೂರು ದಕ್ಷಿಣ</td><td>654</td><td>2172</td><td>2826</td><td>1624</td><td>1202</td><td>772</td><td>430</td></tr>
<tr><td>ಆನೇಕಲ್</td><td>928</td><td>4104</td><td>5032</td><td>2986</td><td>2046</td><td>1298</td><td>748</td></tr>
<tr><td>ಬೆಂಗಳೂರು ಪೂರ್ವ</td><td>290</td><td>1899</td><td>2189</td><td>1565</td><td>624</td><td>369</td><td>255</td></tr>
<tr><td>ಯಲಹಂಕ</td><td>364</td><td>2520</td><td>2884</td><td>1904</td><td>980</td><td>607</td><td>373</td></tr>
<tr><td>ಒಟ್ಟು</td><td>2622</td><td>12406</td><td>15028</td><td>9360</td><td>5668</td><td>3542</td><td>2126</td></tr>
</table></td></tr>
<tr><td>ಆ)</td><td>ಭೂಪರಿವರ್ತನೆ ಶುಲ್ಕದ ಜೊತೆಯಲ್ಲಿ ಪೋಡಿ ಶುಲ್ಕವನ್ನು ಪಡೆದಿದ್ದರೂ ಸಹ ಇನ್ನೂ ಪೋಡಿ ಪ್ರಕರಣಗಳನ್ನು ಇತ್ಯರ್ಥಗೊಳಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td rowspan="2">ಸರ್ಕಾರದ ಗಮನಕ್ಕೆ ಬಂದಿದೆ.<br><br>ಬಾಕಿಯಿರುವ ತತ್ಕಾಲ್ ಪೋಡಿ ಅರ್ಜಿಗಳ ಶೀಘ್ರ ವಿಲೇವಾರಿಗೆ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ:-<br><br>1) ಭೂಮಾಪನ ಇಲಾಖೆಯಲ್ಲಿ ಮೋಜಿಣಿ ತಂತ್ರಾಂಶದ ಮುಖಾಂತರ ಅರ್ಜಿಗಳ ಸ್ವೀಕೃತಿ, ಅರ್ಜಿಗಳ ಹಂಚಿಕೆ, ಅಳತೆ ಮಾಡಿ ಅಪ್‌ಲೋಡ್ ಮಾಡುವುದು, ಕಡತಗಳ ಪರಿಶೀಲನೆ ಮೊದಲಾದ ಎಲ್ಲಾ ಅಳತೆ ಪ್ರಕ್ರಿಯೆಗಳನ್ನು ಪ್ರತಿ ಹಂತದಲ್ಲಿಯೂ FIFO (ಸರದಿ ಸಾಲಿನಂತೆ) ಆನ್‌ಲೈನ್ ಮೂಲಕ ನಿರ್ವಹಿಸಲಾಗುತ್ತಿದೆ.<br>2) ನಿಯಮಿತವಾಗಿ ಕಂದಾಯ ಇಲಾಖೆಯಿಂದ ಪಹಣಿ ತಿದ್ದುಪಡಿ ಕುರಿತು ಕಂದಾಯ ಅದಾಲತ್‌ಗಳನ್ನು ನಡೆಸಲಾಗುತ್ತಿದೆ.<br>3) ನಮೂನೆ 1 ರಿಂದ 5 ಅನ್ನು ಭರ್ತಿ ಮಾಡಲು ಅಗತ್ಯ ಸೂಚನೆ ಮತ್ತು ಮಾರ್ಗಸೂಚಿಗಳನ್ನು ನೀಡಲಾಗಿದೆ.<br>4) ಕಾಲಕಾಲಕ್ಕೆ ವಿಡಿಯೋ ಸಂವಾದ ಮತ್ತು ವಿಭಾಗವಾರು ಅಧಿಕಾರಿಗಳ ಸಭೆ ನಡೆಸಿ ಪ್ರಗತಿ ಪರಿಶೀಲನೆ ಮಾಡಿ ಹೆಚ್ಚಿನ ಪ್ರಗತಿ ಸಾಧಿಸಲು ಸೂಕ್ತ ಮಾರ್ಗದರ್ಶನ ಮತ್ತು ಅಗತ್ಯ ಸೂಚನೆ ನೀಡಲಾಗುತ್ತಿದೆ.<br>5) ಹೆಚ್ಚಿನ ಪ್ರಕರಣಗಳು ಬಾಕಿ ಇರುವ ತಾಲ್ಲೂಕುಗಳಿಗೆ ಕಡಿಮೆ ಪ್ರಕರಣಗಳು ಬಾಕಿ ಇರುವ ತಾಲ್ಲೂಕಿನಿಂದ ಭೂಮಾಪಕರನ್ನು ನಿಯೋಜನೆ ಮಾಡಿ ಪ್ರಕರಣಗಳನ್ನು ವಿಲೇಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br>6) 2072 ಪರವಾನಗಿ ಭೂಮಾಪಕರ ಆಯ್ಕೆ ಕುರಿತು ಅರ್ಜಿಗಳನ್ನು ಆಹ್ವಾನಿಸಿ, ದಿನಾಂಕ 01-02-2021 ಮತ್ತು 02-02-2021 ರಂದು ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿ, ಜಿಲ್ಲಾವಾರು ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ತರಬೇತಿ ನಂತರ ಉತ್ತೀರ್ಣವಾದ</td></tr>
<tr><td></td><td>ಪೋಡಿ ಪ್ರಕರಣಗಳನ್ನು ಇತ್ಯರ್ಥಗೊಳಿಸಿ ಅತಿ ಶೀಘ್ರವಾಗಿ ವಿತರಿಸುವಲ್ಲಿ ಸಂಬಂಧಪಟ್ಟ ಇಲಾಖೆಗಳು ವಿಳಂಬ ನೀತಿ ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು?</td></tr>
</table>

| | | |
|---|---|---|
| | | 841 ಜನರಿಗೆ ಪರವಾನಗಿ ನೀಡಿ ರಾಜ್ಯದ ವಿವಿಧ ತಾಲ್ಲೂಕುಗಳಿಗೆ ನಿಯೋಜಿಸಿದ್ದು, ನಿಯೋಜಿತ ತಾಲ್ಲೂಕುಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಇಲಾಖಾ ತರಬೇತಿ ಪೂರ್ಣ ಗೊಳಿಸಿರುವ 438 ಜನ ಪರವಾನಗಿ ಭೂಮಾಪಕರಿಗೆ ವಿವಿಧ ತಾಲ್ಲೂಕುಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯೋಜನೆ ಮಾಡಲಾಗಿದೆ. ಪ್ರಸ್ತುತ 508 ಪರವಾನಗಿ ಭೂಮಾಪಕರು ತರಬೇತಿ ಪಡೆಯುತ್ತಿದ್ದು, ತರಬೇತಿ ನಂತರ ಉತ್ತೀರ್ಣರಾದವರಿಗೆ ಪರವಾನಗಿ ನೀಡಿ ರಾಜ್ಯದ ವಿವಿಧ ತಾಲ್ಲೂಕುಗಳಿಗೆ ಕಾರ್ಯ ನಿಯೋಜಿಸಲಾಗುತ್ತಿದೆ.<br>7) ಅಗತ್ಯತೆಗನುಗುಣವಾಗಿ ಹೊಸದಾಗಿ 3000 ಪರವಾನಗಿ ಭೂಮಾಪಕರನ್ನು ಆಯ್ಕೆ ಮಾಡಿಕೊಳ್ಳಲು ದಿನಾಂಕ 28-12-2021 ರಂದು ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಪ್ರವೇಶ ಪರೀಕ್ಷೆ ನಡೆಸಿ ಜಿಲ್ಲಾವಾರು ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ, ತರಬೇತಿ ನಂತರ ಉತ್ತೀರ್ಣರಾದವರಿಗೆ ಪರವಾನಗಿ ನೀಡಿ ರಾಜ್ಯದ ವಿವಿಧ ತಾಲ್ಲೂಕುಗಳಿಗೆ ಕಾರ್ಯ ನಿಯೋಜಿಸಲಾಗುತ್ತಿದೆ.<br>8) ನಿಯಮಗಳಿಗೆ ಅಗತ್ಯ ತಿದ್ದುಪಡಿ ತಂದು ಸರ್ಕಾರಿ ಭೂಮಾಪಕರು ಹಾಗೂ ಪರವಾನಗಿ ಭೂಮಾಪಕರುಗಳಿಗೆ ಅಳತೆ ಅರ್ಜಿಗಳನ್ನು ಸಮರ್ಪಕ ರೀತಿಯಲ್ಲಿ ಹಂಚಿಕೆ ಮಾಡಲಾಗುತ್ತಿದ್ದು, ಇದರಿಂದ ಭೂಮಾಪಕರ ಕಾರ್ಯ ಒತ್ತಡ ಕಡಿಮೆಯಾಗಿ, ಅಳತೆ ಅರ್ಜಿಗಳನ್ನು ಶೀಘ್ರವಾಗಿ ವಿಲೇವಾರಿ ಮಾಡಲು ಸಾಧ್ಯವಾಗುತ್ತಿದೆ. |

**ಸಂಖ್ಯೆ: ಕಂಇ 201 ಎಸ್ಎಸ್‌ಸಿ 2022**

**(ಆರ್.ಅಶೋಕ)**
ಕಂದಾಯ ಸಚಿವರು